ರಾಯಚೂರು ವಿಶ್ವವಿದ್ಯಾಲಯ RAICHUR UNIVERSITY
ಯರಗೇರಾ–584133, ರಾಯಚೂರು, ಕರ್ನಾಟಕ, ಭಾರತ
Office No. +919141030953 ಪರೀಕ್ಷಾ ವಿಭಾಗ E-mail: registrarevrur@gmail.com

ಕ್ರ.ಸಂ: ರಾವಿರಾ/ಪರೀಕ್ಷಾ/ಯು.ಜಿ–I,III&V/2023-24/ 833 ದಿನಾಂಕ:24.03.2024

Examination Section RAICHUR UNIVERSITY

## ಸುತ್ತೋಲೆ

**ವಿಷಯ:** ದಿನಾಂಕ 25 ಮತ್ತು 26 ಮಾರ್ಚ್–2024ರಂದು ನಡೆಯಲಿರುವ 2023–24ನೇ ಸಾಲಿನ ಎಲ್ಲಾ ಸ್ನಾತಕ(NEP) ಪರೀಕ್ಷೆಗಳನ್ನು ಮುಂದೂಡುವ ಕುರಿತು.

**ಉಲ್ಲೇಖ:** 1. ಕ್ರ.ಸಂ: ರಾವಿರಾ/ಪರೀಕ್ಷಾ/ಯು.ಜಿ–I,III,V/2023-24/811 ದಿನಾಂಕ 13.03.2024
2. ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ 24.03.2024

*****

ಈ ಮೇಲ್ಕಾಣಿಸಿದ ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ, ರಾಯಚೂರು ವಿಶ್ವವಿದ್ಯಾಲಯದ ಅಧೀನಕ್ಕೆ ಒಳಪಡುವ ರಾಯಚೂರು ಹಾಗೂ ಯಾದಗಿರಿ ಜಿಲ್ಲೆಗಳ ಪದವಿ ಕಾಲೇಜಿನ ಪ್ರಾಂಶುಪಾಲರುಗಳ ಗಮನಕ್ಕೆ ತರಬಯಸುವುದೇನೆಂದರೆ, ದಿನಾಂಕ 25.03.2024 ರಂದು ರಾಯಚೂರು ಜಿಲ್ಲೆಯಾದ್ಯಂತ ಹಾಗೂ ದಿನಾಂಕ 26.03.2024 ರಂದು ಯಾದಗಿರಿ ಜಿಲ್ಲೆಯಾದ್ಯಂತ ಹೋಳಿ ಹಬ್ಬವನ್ನು ಆಚರಿಸುತ್ತಿರುವುದರಿಂದ ಈ ದಿನಾಂಕಗಳಂದು ನಡೆಯಬೇಕಿದ್ದ ಎಲ್ಲಾ ಸ್ನಾತಕ ಪರೀಕ್ಷೆಗಳನ್ನು ಮುಂದೂಡಲಾಗಿದೆ. ಇನ್ನುಳಿದ ಎಲ್ಲಾ ಪರೀಕ್ಷೆಗಳು ಉಲ್ಲೇಖ (1) ರ ಪ್ರಕಾರ 27.03.2024ರಿಂದ ವೇಳಾಪಟ್ಟಿಗೆ ಅನುಗುಣವಾಗಿ ಯಥಾವತ್ತಾಗಿ ಪರೀಕ್ಷೆಗಳು ನಡೆಯುತ್ತವೆ. ಮುಂದೂಡಿದ ಪರೀಕ್ಷಾ ದಿನಾಂಕಗಳನ್ನು ಮುಂದಿನ ದಿನಗಳಲ್ಲಿ ಪ್ರಕಟಿಸಲಾಗುವುದು. ಈ ಮುಂದೂಡಿದ ಪರೀಕ್ಷೆಗಳ ಮಾಹಿತಿಯನ್ನು ಎಲ್ಲಾ ವಿದ್ಯಾರ್ಥಿಗಳ ಗಮನಕ್ಕೆ ತರಬೇಕಾಗಿ ಎಲ್ಲಾ ಕಾಲೇಜಿನ ಪ್ರಾಂಶುಪಾಲರುಗಳಿಗೆ ಈ ಮೂಲಕ ಸೂಚಿಸಲಾಗಿದೆ.

(ಪ್ರೊ. ಯರಿಸ್ವಾಮಿ ಎಂ.)
ಕುಲಸಚಿವರು (ಮೌಲ್ಯಮಾಪನ)
ರಾಯಚೂರು ವಿಶ್ವವಿದ್ಯಾಲಯ, ರಾಯಚೂರು

ಗೆ,
ರಾಯಚೂರು ವಿಶ್ವವಿದ್ಯಾಲಯದ ಅಧೀನಕ್ಕೆ ಒಳಪಡುವ ರಾಯಚೂರು ಹಾಗೂ ಯಾದಗಿರಿ ಜಿಲ್ಲೆಗಳ ಪದವಿ ಕಾಲೇಜಿನ ಪ್ರಾಂಶುಪಾಲರುಗಳ ಗಮನಕ್ಕೆ ಹಾಗೂ ಸೂಕ್ತ ಕ್ರಮಕ್ಕಾಗಿ.

ಪ್ರತಿಗಳು:

1. ಮಾನ್ಯ ಕುಲಪತಿಗಳು ಆಪ್ತ ಕಾರ್ಯದರ್ಶಿಗಳು/ ಮಾನ್ಯ ಕುಲಸಚಿವರ ಆಪ್ತ ಸಹಾಯಕ ರಾಯಚೂರು ವಿಶ್ವವಿದ್ಯಾಲಯ, ರಾಯಚೂರು.
2. ಕುಲಸಚಿವರು ಮೌಲ್ಯಮಾಪನ ಆಪ್ತಕಾರ್ಯದರ್ಶಿ ರಾಯಚೂರು ವಿಶ್ವವಿದ್ಯಾಲಯ, ರಾಯಚೂರು.
3. ಉಪಕುಲಸಚಿವರು,ರಾಯಚೂರು ವಿಶ್ವವಿದ್ಯಾಲಯ, ರಾಯಚೂರು.
4. ಜಾಲತಾಣ ವಿಭಾಗ, ರಾಯಚೂರು ವಿಶ್ವವಿದ್ಯಾಲಯ, ರಾಯಚೂರು.
5. ಕಚೇರಿ ಪ್ರತಿ.

Examination Section RAICHUR UNIVERSITY